# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಹೆಚ್)/ಪಿಆರ್/ 36/2023-24
E office No.36299

ಮುಖ್ಯ ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು. ದಿನಾಂಕ: 5.8.23

**ಕಛೇರಿ ಆದೇಶ**

ವಿಷಯ: ಶ್ರೀ ಮಹೇಶ್.ಜಿ.ಆರ್, ಉಪ ವಲಯ ಅರಣ್ಯಾಧಿಕಾರಿ(ಬೊಮ್ಮನಹಳ್ಳಿ) ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.
ಉಲ್ಲೇಖ: ರಾಜ್ಯಾಧ್ಯಕ್ಷರು, ಕ.ಕ.ಜ.ವೇ ರವರ ಪತ್ರದ ದಿನಾಂಕ: 12-07-2023.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಮಹೇಶ್.ಜಿ.ಆರ್, ಉಪ ವಲಯ ಅರಣ್ಯಾಧಿಕಾರಿ (ಬೊಮ್ಮನಹಳ್ಳಿ) ರವರು ಅರಣ್ಯ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನೆಗೊಂಡು ದಿನಾಂಕ: 22-3-2017ರಿಂದ ಉಪ ವಲಯ ಅರಣ್ಯಾಧಿಕಾರಿ (ಬೊಮ್ಮನಹಳ್ಳಿ) ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಉಲ್ಲೇಖಿತದ ಅಧಿಕಾರಿಯವರ ಗರಿಷ್ಠ ನಿಯೋಜನಾ ಅವಧಿ ಮುಕ್ತಾಯಗೊಂಡಿರುವುದರಿಂದ, ಇವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಕೆಳಕಂಡ ಷರತ್ತಿಗೊಳಪಡಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ದಿನಾಂಕ: 05-08-2023 ನಮೋದಿಸಿ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

**ಷರತ್ತುಗಳು:**

1. ಸದರಿಯವರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿಯವರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮ ಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಯವರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ಸದರಿಯವರು ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ತ್ ಕಾರ್ಡ್ ಗುರುತಿನ ಚೀಟಿ (Identity Card) ಹಾಗೂ ಲ್ಯಾಪ್‌ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದಂತೆ ಸಂಬಂಧಪಟ್ಟ ಬಟವಾಡೆ ಅಧಿಕಾರಿ ರವರುಗಳು ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದು.

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದಂತೆ)

5/8

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

2/8/2023 3/8/23

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಯೋಜನ/ ಆಡಳಿತ/ ತೋಟಗಾರಿಕೆ ಮತ್ತು ಅರಣ್ಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ, ಬಿಬಿಎಂಪಿ ರವರಿಗೆ ಕಳುಹಿಸಿದೆ.
: ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಿಬಿಎಂಪಿ ರವರಿಗೆ ಕಳುಹಿಸಿದೆ.
: ನಿರ್ದೇಶಕರು (ಮಾಹಿತಿ ಮತ್ತು ತಂತ್ರಜ್ಞಾನ) ಹಾಗೂ ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸುತ್ತಾ, ಸದರಿಯವರ ಮೊಬೈಲ್ ಫೋನ್, ಸಿಮ್‌ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಮು.ಲೆ.ಅ/ಮುಲೆಪ/ಉ.ನಿ (ಹಣಕಾಸು-ಬೊಮ್ಮನಹಳ್ಳಿ) ರವರುಗಳಿಗೆ ಕಳುಹಿಸಿದೆ.
: ಸಂಬಂಧಪಟ್ಟ ನೌಕರರಿಗೆ / ಕಛೇರಿ ಪ್ರತಿ.

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 425
ದಿನಾಂಕ: 7/8/23
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಎನ್.ಆರ್.ಚೌಕ, ಬೆಂಗಳೂರು

FDC
08/08/23